ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಈಗ ಅದನ್ನು ಸಭೆಯ ಮತಕ್ಕೆ ಹಾಕುತ್ತೇನೆ.

2010ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿಯೊಂದಿಗೆ ಈ ಸಭೆಯು ಅಂಗೀಕರಿಸಬೇಕು ಎಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ತಿದ್ದುಪಡಿಯೊಂದಿಗೆ ಅನುಮೋದನೆ ದೊರಕಿದೆ.

8. ಮಾನ್ಯ ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ:

ಅಧ್ಯಕ್ಷರು: "2011ರ ಜನವರಿ 6ರಂದು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ಶ್ರೀ ಸಿದ್ದು ಸವದಿ ಅವರು ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಮತ್ತು ಸರ್ಕಾರದ ಉತ್ತರ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

"2011ರ ಜನವರಿ 6 ರಂದು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ

ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ".

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ. ವಂದನಾ ನಿರ್ಣಯದ ಪ್ರಸ್ತಾವಕ್ಕೆ ಸಭೆಯ ಅನುಮತಿ ದೊರಕಿದೆ. ವಂದನಾ ನಿರ್ಣಯವನ್ನು ಮಾನ್ಯ ರಾಜ್ಯಪಾಲರಿಗೆ ಕಳುಹಿಸಿಕೊಡಲಾಗುವುದು.

ಈ ಸದನವನ್ನು ಮಧ್ಯಾಹ್ನ 3.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಬೆಳಿಗ್ಗೆ 11 ಗಂಟೆ 53 ನಿಮಿಷಕ್ಕೆ ಮುಕ್ತಾಯವಾಗಿ ಮತ್ತೆ ಮಧ್ಯಾಹ್ನ 3.00 ಗಂಟೆಗೆ ಸದನ ಸಮಾವೇಶವಾಗುವಂತೆ ಮುಂದೂಡಲಾಯಿತು)

(ಸದನವು ಪುನಃ ಮಧ್ಯಾಹ್ನ 3.28ಕ್ಕೆ ಸಮಾವೇಶಗೊಂಡಿತು)

(ಸಭಾಧ್ಯಕ್ಷರು ಪೀಠವನ್ನಲಂಕರಿಸಿದ್ದರು)

ಸಭಾಧ್ಯಕ್ಷರು: ಪ್ರಕಟಣೆ

9. ಪ್ರಕಟಣೆ:

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ತಿನಲ್ಲಿ 2011ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ದಿನಾಂಕ:12ನೇ ಜನವರಿ, 2011ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸ ಲಾಯಿತೆಂದು ತಿಳಿಸಿರುತ್ತಾರೆ.

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ತಿನಲ್ಲಿ ಈ ಕೆಳಕಂಡ